# ಫ್ಲಿಪ್ ಕಾರ್ಟ್ ನಿಂದ ಕರ್ನಾಟಕಕ್ಕೆ ಐಸಿಯು ವೆಂಟಿಲೇಟರ್ ಗಳ ದೇಣಿಗೆ

- **ಐಸಿಯು ಮಲ್ಟಿಪ್ಯಾರಾ ಮಾನಿಟರ್ ಗಳನ್ನೂ ಕೊಡುಗೆಯಾಗಿ ನೀಡಿದ ಫ್ಲಿಪ್ ಕಾರ್ಟ್**
- **ದೇಶದ ವಿವಿಧ ರಾಜ್ಯಗಳಿಗೆ ಐಸಿಯು ವೆಂಟಿಲೇಟರ್ ಗಳನ್ನು ದೇಣಿಗೆಯಾಗಿ ನೀಡಿದ ಫ್ಲಿಪ್ ಕಾರ್ಟ್**
- **ಕೋವಿಡ್-19 ಪರಿಹಾರ ಕಾರ್ಯಗಳಲ್ಲಿ ತೊಡಗಿರುವ ರಾಜ್ಯ ಸರ್ಕಾರಕ್ಕೆ ಬಲ ನೀಡುತ್ತಿರುವ ಕಂಪನಿ**

ಬೆಂಗಳೂರು, ಜೂನ್ 28, 2021: ಪ್ರಸ್ತುತ ಕೋವಿಡ್-19 ನಿರ್ಮೂಲನೆಗೆ ಜಾರಿಯಲ್ಲಿರುವ ಪ್ರಯತ್ನಗಳಿಗೆ ನೆರವಾಗುವ ಭಾಗವಾಗಿ  ಮತ್ತು ಪರಿಹಾರ ಪ್ರಯತ್ನಗಳಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಭಾರತದ ದೇಶೀಯ ಇ-ಕಾಮರ್ಸ್ ಕಂಪನಿಯಾಗಿರುವ ಫ್ಲಿಪ್ ಕಾರ್ಟ್ ಇಂದು ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ಕಾರ್ಪೊರೇಷನ್ ಲಿಮಿಟೆಡ್ (ಕೆಎಸ್ಎಂಎಸ್ ಸಿಎಲ್)ಗೆ 30 ಜೀವ ರಕ್ಷಕ ಐಸಿಯು ವೆಂಟಿಲೇಟರ್ ಗಳನ್ನು ದೇಣಿಗೆಯಾಗಿ ನೀಡಿದೆ. ಕೋವಿಡ್-19 ರೋಗಿಗಳಿಗೆ ಚಿಕಿತ್ಸೆಯನ್ನು ನೀಡಲು ಮತ್ತು ಸಕಾಲದಲ್ಲಿ ನಿರ್ಣಾಯಕ ಚಿಕಿತ್ಸೆಯನ್ನು ನೀಡುವ ರಾಜ್ಯ ಸರ್ಕಾರಗಳ ಪ್ರಯತ್ನಗಳಿಗೆ ಬೆಂಬಲವಾಗಿ ನಿಲ್ಲುವ ದಿಸೆಯಲ್ಲಿ ಫ್ಲಿಪ್ ಕಾರ್ಟ್ ಈ ಐಸಿಯು ವೆಂಟಿಲೇಟರ್ ಗಳನ್ನು ಕೊಡುಗೆಯಾಗಿ ನೀಡಿದೆ. ಇದಲ್ಲದೇ, ಕೋವಿಡ್-19 ವಿರುದ್ಧದ ಹೋರಾಟಕ್ಕೆ ಮತ್ತಷ್ಟು ಬಲ ತುಂಬಲೆಂದು ಫ್ಲಿಪ್ ಕಾರ್ಟ್ 250 ಮಲ್ಟಿಪ್ಯಾರಾ ಮಾನಿಟರ್ ಗಳನ್ನೂ ಸಹ ಕರ್ನಾಟಕ ಸರ್ಕಾರಕ್ಕೆ ಪೂರೈಸಿದೆ.

ಫ್ಲಿಪ್ ಕಾರ್ಟ್ ನ ಈ ನೆರವಿನ ಬಗ್ಗೆ ಮಾತನಾಡಿದ ಕರ್ನಾಟಕದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು, ``ಕೋವಿಡ್-19 ರ ಎರಡನೇ ಅಲೆಯ ವೇಳೆ ಸೋಂಕು ಹರಡದಂತೆ ರಾಜ್ಯ ಸರ್ಕಾರ ಎಲ್ಲಾ ರೀತಿಯ ವಿಚಕ್ಷಣ ಮತ್ತು ಕಂಟೇನ್ಮೆಂಟ್ ಕ್ರಮಗಳನ್ನು ಕೈಗೊಂಡಿದೆ. ಆದಾಗ್ಯೂ, ಸಾರ್ವಜನಿಕ ಆರೋಗ್ಯ ವ್ಯವಸ್ಥೆಯ ಮೂಲಸೌಕರ್ಯವನ್ನು ಸೂಕ್ತವಾದ ರೀತಿಯಲ್ಲಿ ಬೆಂಬಲಿಸುವುದು ಮತ್ತು ನವೀಕರಿಸುವುದು ಈ ಸಂದರ್ಭದಲ್ಲಿ ಸೂಕ್ತವಾಗಿದೆ. ಸಮುದಾಯಕ್ಕೆ ಬೆಂಬಲ ನೀಡುವ ನಿಟ್ಟಿನಲ್ಲಿ ಕೋವಿಡ್-19 ರ ವಿರುದ್ಧದ ಹೋರಾಟ ಮತ್ತು ಕರ್ನಾಟಕದಲ್ಲಿ ಕೈಗೊಂಡಿರುವ ಹಲವಾರು ಪ್ರಯತ್ನಗಳಿಗೆ ಬೆಂಬಲವಾಗಿ ಫ್ಲಿಪ್ ಕಾರ್ಟ್ ನಿಂತಿರುವ ಕ್ರಮವನ್ನು ನಾನು ಪ್ರಶಂಸಿಸುತ್ತೇನೆ. ಫ್ಲಿಪ್ ಕಾರ್ಟ್ 30 ಐಸಿಯು ವೆಂಟಿಲೇಟರ್ ಗಳು ಮತ್ತು 250 ಐಸಿಯು

ಮಲ್ಟಿಪ್ಯಾರಾ ಮಾನಿಟರ್ ಗಳನ್ನು ನೀಡಿರುವುದು ನಾವು ಕೋವಿಡ್-19 ರ ವಿರುದ್ಧ ನಡೆಸುತ್ತಿರುವ ಹೋರಾಟಕ್ಕೆ ಮತ್ತಷ್ಟು ಬಲ ಸಿಕ್ಕಂತಾಗಿದೆ" ಎಂದು ಅಭಿಪ್ರಾಯಪಟ್ಟರು.

ಫ್ಲಿಪ್ ಕಾರ್ಟ್ ನ ಗ್ರೂಪ್ ಸಿಇಒ ಕಲ್ಯಾಣ್ ಕೃಷ್ಣಮೂರ್ತಿ ಅವರು ಮಾತನಾಡಿ, ``ಪ್ರಸ್ತುತ ತಲೆದೋರಿರುವ ಸಾಂಕ್ರಾಮಿಕದ ವಿರುದ್ಧ ಹೋರಾಟ ನಡೆಸುತ್ತಿರುವ ವಿವಿಧ ರಾಜ್ಯ ಸರ್ಕಾರಗಳಿಗೆ ಬೆಂಬಲ ನೀಡುವುದು ಮತ್ತು ಕೋವಿಡ್ ಪರಿಹಾರ ಕ್ರಮಗಳಿಗೆ ಸಂಪನ್ಮೂಲಗಳನ್ನು ಒದಗಿಸುವ ನಿಟ್ಟಿನಲ್ಲಿ ಫ್ಲಿಪ್ ಕಾರ್ಟ್ ಮತ್ತು ಅದರ ತಂಡವು ಬದ್ಧವಾಗಿದೆ ಮತ್ತು ಈ ದಿಸೆಯಲ್ಲಿ ಹೆಜ್ಜೆ ಇಟ್ಟಿದೆ. ಈ ಸವಾಲಿನ ಸಂದರ್ಭದಲ್ಲಿ ದೇಶ ಮತ್ತು ಸಮುದಾಯಕ್ಕೆ ಸಹಾಯ ಮಾಡಲು ಫ್ಲಿಪ್ ಕಾರ್ಟ್ ಹಲವಾರು ಪ್ರಯತ್ನಗಳನ್ನು ನಡೆಸುತ್ತಿದೆ. ಇದಕ್ಕಾಗಿ  ನಮ್ಮ ಲಾಜಿಸ್ಟಿಕ್ ಸಾಮರ್ಥ್ಯಗಳನ್ನು ಸದುಪಯೋಗಪಡಿಸಿಕೊಳ್ಳುತ್ತಿದೆ ಮತ್ತು ಆರೋಗ್ಯ ವೃತ್ತಿಪರರ ಅತ್ಯಂತ ನಿರ್ಣಾಯಕ ಅಗತ್ಯತೆಗಳ ಕಡೆಗೆ ಸಂಪನ್ಮೂಲಗಳನ್ನು ಸಜ್ಜುಗೊಳಿಸುತ್ತದೆ. ಈ ಮೂಲಕ ರೋಗಿಗಳ ಚಿಕಿತ್ಸೆಗೆ ಅಗತ್ಯವಿರುವ ಸೇವೆಗಳನ್ನು ಒದಗಿಸಲು ಬದ್ಧವಾಗಿದೆ. ಸೂಕ್ತವಾದ ವೈದ್ಯಕೀಯ ಆರೈಕೆ ಉಪಕರಣಗಳು ಲಭ್ಯವಾಗುವಂತೆ ನಾವು ವಿವಿಧ ಪಾಲುದಾರರು ಮತ್ತು ರಾಜ್ಯ ಸರ್ಕಾರಗಳೊಂದಿಗೆ ನಿಕಟವಾದ ಸಹಯೋಗವನ್ನು ಮಾಡಿಕೊಂಡು ಕಾರ್ಯ ನಿರ್ವಹಿಸುತ್ತಿದ್ದೇವೆ. ಈ ಐಸಿಯು ವೆಂಟಿಲೇಟರ್ ಗಳು ಮತ್ತು ಪ್ಯಾರಾ ಮಾನಿಟರ್ ಗಳು ಕೋವಿಡ್ ವಿರುದ್ಧದ ಹೋರಾಟದಲ್ಲಿ ಸರ್ಕಾರದ ಪ್ರಯತ್ನಗಳನ್ನು ಮತ್ತಷ್ಟು ಹೆಚ್ಚಿಸಲು ಪೂರಕವಾಗಿವೆ ಎಂದು ನಾವು ಭಾವಿಸುತ್ತೇವೆ" ಎಂದು ತಿಳಿಸಿದರು.

ಕಳೆದ 15 ತಿಂಗಳುಗಳಲ್ಲಿ ಈ ಸಾಂಕ್ರಾಮಿಕದ ಅವಧಿಯಲ್ಲಿ ಫ್ಲಿಪ್ ಕಾರ್ಟ್ ದೇಶಾದ್ಯಂತ ವಿವಿಧ ರಾಜ್ಯ ಸರ್ಕಾರಗಳು ಮತ್ತು ಸ್ಥಳೀಯ ಆಡಳಿತಗಳಿಗೆ ತನ್ನ ಬೆಂಬಲವನ್ನು ನೀಡುತ್ತಾ ಬಂದಿದೆ. ನಿರ್ಣಾಯಕ ವೈದ್ಯಕೀಯ ಉತ್ಪನ್ನಗಳ ಪೂರೈಕೆ, ಪರ್ಸನಲ್ ಪ್ರೊಟೆಕ್ಟಿವ್ ಇಕ್ವಿಪ್ ಮೆಂಟ್ ಗಳನ್ನು ತನ್ನ ಪೂರೈಕೆ ಜಾಲದ ಮೂಲಕ ಅಗತ್ಯವಿರುವ ಕಡೆಗೆ ತಲುಪಿಸುವ ಕೆಲಸ ಮಾಡುತ್ತಾ ಬಂದಿದೆ. ಅಲ್ಲದೇ, ಅಗತ್ಯವಿರುವ ವೈದ್ಯಕೀಯ ಉತ್ಪನ್ನಗಳನ್ನು ಮತ್ತು ಆಕ್ಸಿಜನ್ ಸಿಲಿಂಡರ್ ಗಳನ್ನೂ ಪೂರೈಕೆ ಮಾಡಿದೆ. ಈ ಮೂಲಕ ಫ್ಲಿಪ್ ಕಾರ್ಟ್ ಕೋವಿಡ್ ವಿರುದ್ಧದ ಹೋರಾಟದಲ್ಲಿ ತನ್ನದೇ ಪ್ರಮುಖ ಪಾತ್ರ ವಹಿಸುತ್ತಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಮ್ಮುಖದಲ್ಲಿ ನಡೆದ ಸಮಾರಂಭದಲ್ಲಿ ಈ ವೈದ್ಯಕೀಯ ವೆಂಟಿಲೇಟರ್ ಗಳನ್ನು ಕರ್ನಾಟಕ ಸರ್ಕಾರಕ್ಕೆ ಹಸ್ತಾಂತರ ಮಾಡಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ಉಪ ಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥನಾರಾಯಣ, ವೈದ್ಯಕೀಯ ಶಿಕ್ಷಣ ಮತ್ತು ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಅವರಿದ್ದರು.

**About the Flipkart Group**

The Flipkart Group is one of India's leading digital commerce entities and includes group companies Flipkart, Myntra, Flipkart Wholesale and Cleartrip. Started in 2007, Flipkart has

enabled millions of consumers, sellers, merchants, and small businesses to be a part of India's e-commerce revolution, with a registered customer base of more than 350 million, offering over 150 million products across 80+ categories. Our efforts to democratize e-commerce in India, drive access and affordability, delight customers, create lakhs of jobs in the ecosystem and empower generations of entrepreneurs and MSMEs have inspired us to innovate on many industry firsts. The recent launch of Flipkart Wholesale, our new digital marketplace, is a testament to our commitment to accelerate the growth of kiranas and MSMEs in India. Flipkart is known for pioneering services such as Cash on Delivery, No Cost EMI and easy returns – customer-centric innovations that have made online shopping more accessible and affordable for millions of Indians. Together with Myntra, which holds a prominent position in the online fashion market, Flipkart Wholesale and Cleartrip, the Flipkart Group will continue to steer the transformation of commerce in India through technology.

For more information, please contact media@flipkart.com